**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ದೇವದುರ್ಗ.**

**CC No.596/2023**

**CW -2 PW-2**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ಮಲ್ಲಪ್ಪ |
| ತಂದೆ | ಃ | ಬಾಳಪ್ಪ |
| ವಯಸ್ಸು | ಃ | 40 |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ಇಂಗಳದಾಳ |
| ಪ್ರಮಾಣಿಕರಿಸಿದ ದಿನಾಂಕ | ಃ | **24-04-2026** |

---

**<u>ಮುಖ್ಯ ವಿಚಾರಣೆ:-</u> ಮಾನ್ಯ ಸ.ಸ.ಅ ರವರಿಂದ**

ಪ್ರಕರಣದ ಬಗ್ಗೆ ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ. ಪಂಚನಾಮೆಯ ಮೇಲೆ ಇದ್ದ ಸಹಿಯನ್ನು ನಿಪಿ-2 ಬಿ ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮಾನ್ಯ ಸಸಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲು:-</u> ಮಾನ್ಯ ಸ.ಸ.ಅ ರವರಿಂದ**

ದಿನಾಂಕ 18.03.2021 ರಂದು ಸಂಜೆ 04.30 ರಿಂದ 05.30 ಗಂಟೆಗೆ ಚಾಸಾ-1 ರವರು ಸತೋರಿಸಿದ ಘಟನ ಸ್ಥಳದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲು:-</u> ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

**ಮರುವಿಚಾರಣೆ:- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ದೇವದುರ್ಗ.**

**CC No.596/2023**

**CW -1 PW-1**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ಸುನೀಲ |
| ತಂದೆ | ಃ | ಈಶಪ್ಪ |
| ವಯಸ್ಸು | ಃ | 25 |
| ಉದ್ಯೋಗ | ಃ | ಚಾಲಕ |
| ವಾಸಸ್ಥಳ | ಃ | ಜಾಗಿರವೆಂಕಟಪೂರು |
| ಪ್ರಮಾಣಿಕರಿಸಿದ ದಿನಾಂಕ | ಃ | **24-04-2026** |

---

**ಮುಖ್ಯ ವಿಚಾರಣೆ:- ಮಾನ್ಯ ಸ.ಸ.ಅ ರವರಿಂದ**

ಪ್ರಕರಣದ ಬಗ್ಗೆ ನನಗೆ ಗೊತ್ತಿಲ್ಲ. ನಾನು ಯಾವುದೇ ದೂರನ್ನು ನೀಡಿಲ್ಲ. ದೂರಿನಲ್ಲಿ ಬರೆದ ಸಂಗತಿಗಳು ನನಗೆ ಗೊತ್ತಿಲ್ಲ. ನನ್ನನ್ನು ಯಾರು ದರೋಡೆ ಮಾಡಿರುವುದಿಲ್ಲ. ದೂರನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಎಂದು ಸಹಿಯನ್ನು ನಿಪಿ-1 ಎ ಎಂದು ಗುರುತಿಸಲಾಯಿತು. ದಿನಾಂಕ 18.03.2021 ರಂದು ಸಂಜೆ 04.30 ರಿಂದ 05.30 ಗಂಟೆಗೆ ನಾನು ತೋರಿಸಿದ ಘಟನ ಸ್ಥಳದಲ್ಲಿ ಪಂಚರ ಸಮಕ್ಷಮ ಪಂಚನಾಮೆ ಮಾಡಿರುವುದಿಲ್ಲ. ಪಂಚನಾಮೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು ಸಹಿಯನ್ನು ನಿಪಿ-2 ಎ ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮಾನ್ಯ ಸಸಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:- ಮಾನ್ಯ ಸ.ಸ.ಅ ರವರಿಂದ**

ದಿನಾಂಕ 17-03-2021 ರಂದು ಬೆಳಿಗಿನ ಜಾವ 03-00 ಗಂಟೆಗೆ ಆರೋಪಿತರು ಹಿರೋ ಹೊಂಡ ಸ್ಪ್ಲೆಂಡರ್ ವಾಹನ ನಂ.ಕೆಎ-36 ಇಯು-9236 ರಲ್ಲಿ ಬಂದು ನಾನು ಮಲಗಿದ್ದ ಹಾಲಿನ ಗಾಡಿಯ ಕ್ಯಾಬಿನ ಗ್ಲಾಸಿನ ಬಿಡ್ ಕಟ್ ಮಾಡಿ ಗ್ಲಾಸ ತೆಗೆದು ಕ್ಯಾಬಿನ ಒಳಗೆ ಬಂದು ನನ್ನನ್ನು ಗಟ್ಟಿಯಾಗಿ ಹಿಡಿದುಕೊಂಡು ನನ್ನ ಎಡಗಡೆ ಜೇಬಿನಲ್ಲಿ ಇದ್ದ 16 ಸಾವಿರ ನಗದು ಹಣವನ್ನು ಬಲವಂತವಾಗಿ ಕಿತ್ತಿಕೊಂಡು ಕೂಗಾಡಿದರೆ ಜೀವ ಸಹಿತ ಬಿಡುವುದಿಲ್ಲ ಅಂತ ಜೀವದ ಬೆದರಿಕೆ ಹಾಕಿರುತ್ತಾರೆ ಎಂದು ಪೋಲಿಸರಿಗೆ ನಿಪಿ-1 ರಂತೆ ದೂರು ನೀಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ದಿನಾಂಕ 18.03.2021 ರಂದು ಸಂಜೆ 04.30 ರಿಂದ 05.30 ಗಂಟೆಗೆ ನಾನು ತೋರಿಸಿದ ಘಟನ ಸ್ಥಳದಲ್ಲಿ ಪಂಚರ ಸಮಕ್ಷಮ ಪಂಚನಾಮೆ ಮಾಡಿರುವುದಿಲ್ಲ. ಆರೋಪಿತರೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲು:-</u> ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

**ಮರುವಿಚಾರಣೆ:- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.